ಅಥವಾ ಶಿಕ್ಷಕರ ಹುದ್ದೆ ಖಾಲಿ ಇರುವ ಶಾಲೆಗಳಿಗೆ ಸ್ಥಳಾಂತರಿಸಿ ಭರ್ತಿ ಮಾಡಿಕೊಳ್ಳಲು ಕ್ರಮವಹಿಸಲಾಗಿದೆ.

ಪದವಿ ಕಾಲೇಜುಗಳ ಕಟ್ಟಡ ನಿರ್ಮಾಣ

770 (1362) ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕು ಹೆತ್ತೂರು ಮತ್ತು ಆಲೂರು ತಾಲ್ಲೂಕುಗಳಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಸ್ವಂತ ಕಟ್ಟಡಗಳು ಇದೆಯೇ?

ಆ) ಇಲ್ಲದಿದ್ದಲ್ಲಿ ಈ ಕಾಲೇಜುಗಳ ಕಟ್ಟಡ ನಿರ್ಮಾಣಕ್ಕೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ಸಕಲೇಶಪುರ ತಾಲ್ಲೂಕಿನ ಹೆತ್ತೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಸ್ವಂತ ಕಟ್ಟಡವಿರುವುದಿಲ್ಲ.

ಆಲೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಮೂರು ಕೊಠಡಿಗಳುಳ್ಳ ಸ್ವಂತ ಕಟ್ಟಡವನ್ನು ನಿರ್ಮಿಸಲಾಗಿರುತ್ತದೆ.

ಆ) ಅಗತ್ಯತೆ ಮತ್ತು ಅನುದಾನದ ಲಭ್ಯತೆ ಆಧರಿಸಿ ಮುಂದಿನ ವರ್ಷಗಳಲ್ಲಿ ಆಲೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಹೆಚ್ಚುವರಿ ಕೊಠಡಿಗಳನ್ನು ಒದಗಿಸಲಾಗುವುದು.

ಹೆತ್ತೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ನಿವೇಶನ ವಿಳಂಬವಾಗಿ ದೊರೆತಿದ್ದರಿಂದ, 2009–10ನೇ ಸಾಲಿನಲ್ಲಿ ಅನುದಾನವನ್ನು ಒದಗಿಸಲಾಗಿರುವುದಿಲ್ಲ.

ಮುಂದಿನ ಸಾಲುಗಳಲ್ಲಿ ಅನುದಾನವನ್ನು ಒದಗಿಸುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು.